Life time
Achievement 4.0

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕ್ರೀಡಾ ಕ್ಷೇತ್ರದಲ್ಲಿ ಜೀವನ ಪರ್ಯಂತ ಸಾಧನೆ ಮಾಡಿದ ಹಿರಿಯ ಕ್ರೀಡಾಪಟು / ತರಬೇತುದಾರರಿಗೆ "ಜೀವಮಾನ ಶ್ರೇಷ್ಠ ಸಾಧನೆ ಪ್ರಶಸ್ತಿ" ನೀಡುವ ಬಗ್ಗೆ.

ಓದಲಾಗಿದೆ: ನಿರ್ದೇಶಕರು, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಡಿವೈಎಸ್‌ಎಸ್/ಕ್ರೀಕಪಂ/38/ಕ್ರೀಜೀಪಸಾಧ/2009-10, ದಿನಾಂಕ: 24-11-2009 ಮತ್ತು 23-03-2010.

******

**ಪ್ರಸ್ತಾವನೆ:**

ಮೇಲೆ ಓದಲಾದ ಉಲ್ಲೇಖಿತ ಪತ್ರಗಳಲ್ಲಿ, ನಿರ್ದೇಶಕರು, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ ಇವರು ಕ್ರೀಡಾ ಕ್ಷೇತ್ರದಲ್ಲಿ ಕ್ರೀಡಾಪಟುವಾಗಿ, ತರಬೇತುದಾರರಾಗಿ ನಿರಂತರ ಸೇವೆ ಸಲ್ಲಿಸಿ ಸಾಧನೆ ಮಾಡಿದಂತಹ ಹಿರಿಯ ಕ್ರೀಡಾಪಟು / ಹಿರಿಯ ತರಬೇತುದಾರರನ್ನು ಗುರುತಿಸಿ, ಪ್ರತಿ ವರ್ಷ ಓರ್ವ ಹಿರಿಯ ಕ್ರೀಡಾಪಟು / ತರಬೇತುದಾರರಿಗೆ "ಕ್ರೀಡಾ ಕ್ಷೇತ್ರದಲ್ಲಿ ಜೀವನ ಪರ್ಯಂತ ಸಾಧನೆ ಪ್ರಶಸ್ತಿ" ಯನ್ನು ನೀಡುವ ಸಂಬಂಧ ಭಾರತ ಸರ್ಕಾರದಲ್ಲಿರುವ ದ್ರೋಣಾಚಾರ್ಯ ಪ್ರಶಸ್ತಿ ಆಧಾರದಂತೆ ಕರ್ನಾಟಕ ರಾಜ್ಯದಲ್ಲಿಯು ಸಹ ಒಂದು ಪ್ರತ್ಯೇಕ ನಿಯಮಾವಳಿ ರೂಪಿಸುವ ಸಂಬಂಧ ನಿಯಮಾವಳಿಗಳನ್ನು ತಯಾರಿಸಿ ಸರ್ಕಾರಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಶಸ್ತಿಯು ರೂ. 1.00 ಲಕ್ಷ ನಗದು ಪುರಸ್ಕಾರ ಹಾಗೂ ಪ್ರಶಸ್ತಿ ಪ್ರಮಾಣ ಪತ್ರ ಒಳಗೊಂಡಿದ್ದು, ಸದರಿ ಪ್ರಶಸ್ತಿಗೆ ಏಕಲವ್ಯ ಪ್ರಶಸ್ತಿಗೆ ಅರ್ಜಿಗಳನ್ನು ಆಹ್ವಾನಿಸುವ ರೀತಿಯಲ್ಲಿಯೇ ಅರ್ಜಿ ಆಹ್ವಾನಿಸುವುದಾಗಿ ಹಾಗೂ ಏಕಲವ್ಯ ಆಯ್ಕೆ ಸಮಿತಿ ಅಧ್ಯಕ್ಷರು/ಸದಸ್ಯರುಗಳೇ "ಜೀವನ ಪರ್ಯಂತ ಸಾಧನೆ ಪ್ರಶಸ್ತಿ ಆಯ್ಕೆ ಸಮಿತಿ"ಯನ್ನು ನಡೆಸಲಾಗುವುದೆಂದು ನಿರ್ದೇಶಕರು ತಿಳಿಸಿ, ಸದರಿ ಯೋಜನೆಯಡಿ ಪ್ರತಿ ವರ್ಷ ಓರ್ವ ಅರ್ಹ ತರಬೇತುದಾರರನ್ನು ಆಯ್ಕೆ ಮಾಡಿ ಪ್ರಶಸ್ತಿ ಪ್ರದಾನ ಮಾಡುವುದಲ್ಲದೇ, ಸದರಿ ವೆಚ್ಚವನ್ನು ಲೆಕ್ಕಶೀರ್ಷಿಕೆ 2204-00-104-0-02-015 ಕ್ರೀಡಾ ಚಟುವಟಿಕೆಗಳಿಗೆ ಪ್ರೋತ್ಸಾಹಧನ ಒದಗಿಸಿರುವ ಅನುದಾನದಲ್ಲಿ ಭರಿಸಲಾಗುವುದಾಗಿ ತಿಳಿಸಿರುತ್ತಾರೆ.

ತರಬೇತುದಾರರು ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಕ್ರೀಡೆಗಳಲ್ಲಿ ಭಾಗವಹಿಸಿ, ಪದಕ ವಿಜೇತರಾಗಿ ರಾಜ್ಯಕ್ಕೆ ಕೀರ್ತಿ ತಂದ ಕ್ರೀಡಾಪಟುಗಳನ್ನು ತಯಾರಿಸಿದಂತಹ ತರಬೇತುದಾರರಿಗೆ "ಕ್ರೀಡಾ ಕ್ಷೇತ್ರದಲ್ಲಿ ಜೀವನ ಪರ್ಯಂತ ಸಾಧನೆ ಪ್ರಶಸ್ತಿ" ಯನ್ನು ನೀಡಲು ಮಾರ್ಗಸೂಚಿಗಳನ್ನು ಅಳವಡಿಸಿ ಸರ್ಕಾರಿ ಆದೇಶ ಹೊರಡಿಸುವಂತೆ ನಿರ್ದೇಶಕರು ಸರ್ಕಾರವನ್ನು ಕೋರಿರುತ್ತಾರೆ.

ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಯುಸೇಇ 357 ಯುಸೇಕ್ರೀ 2009,**

**ಬೆಂಗಳೂರು, ದಿನಾಂಕ: 17-04-2010**

ಕ್ರೀಡಾ ಕ್ಷೇತ್ರದಲ್ಲಿ ಕ್ರೀಡಾಪಟುವಾಗಿ, ತರಬೇತುದಾರರಾಗಿ ನಿರಂತರ ಸೇವೆ ಸಲ್ಲಿಸಿ ಸಾಧನೆ ಮಾಡಿದಂತಹ ಹಿರಿಯ ಕ್ರೀಡಾಪಟು/ಹಿರಿಯ ತರಬೇತುದಾರರನ್ನು ಗುರ್ತಿಸಿ, ಪ್ರತಿವರ್ಷ

.. 2

ಇಬ್ಬರೂ ಹಿರಿಯ ಕ್ರೀಡಾಪಟು / ತರಬೇತುದಾರರಿಗೆ "<u>ಕ್ರೀಡಾ ಕ್ಷೇತ್ರದಲ್ಲಿ ಜೀವನ ಪರ್ಯಂತ ಸಾಧನೆ ಪ್ರಶಸ್ತಿ</u>"ಯನ್ನು ನೀಡಲು ಸರ್ಕಾರವು ತೀರ್ಮಾನಿಸಿ ಆದೇಶಿಸಿದೆ.

ಸದರಿ ಪ್ರಶಸ್ತಿಯು ರೂ. 1.00 ಲಕ್ಷ ನಗದು ಪುರಸ್ಕಾರ ಹಾಗೂ ಪ್ರಶಸ್ತಿ ಪ್ರಮಾಣ ಪತ್ರ ಒಳಗೊಂಡಿರುತ್ತದೆ. ಈ ಪ್ರಶಸ್ತಿಗೆ ಏಕಲವ್ಯ ಪ್ರಶಸ್ತಿಗೆ ಅರ್ಜಿಗಳನ್ನು ಆಹ್ವಾನಿಸುವ ರೀತಿಯಲ್ಲಿಯೇ ಅರ್ಜಿ ಆಹ್ವಾನಿಸುವುದಲ್ಲದೇ, ಏಕಲವ್ಯ ಆಯ್ಕೆ ಸಮಿತಿ ಅಧ್ಯಕ್ಷರು/ಸದಸ್ಯರುಗಳೇ "ಜೀವನ ಪರ್ಯಂತ ಸಾಧನೆ ಪ್ರಶಸ್ತಿ ಆಯ್ಕೆ ಸಮಿತಿ"ಯಲ್ಲಿರುತ್ತಾರೆ. ಸದರಿ ಪ್ರಶಸ್ತಿಯನ್ನು ಭಾರತ ಸರ್ಕಾರದಲ್ಲಿರುವ ದ್ರೋಣಾಚಾರ್ಯ ಪ್ರಶಸ್ತಿ ಆಧಾರದಂತೆ ಕರ್ನಾಟಕ ರಾಜ್ಯದಲ್ಲಿ ಸಹ ಒಂದು ಪ್ರತ್ಯೇಕ ನಿಯಮಾವಳಿಗಳನ್ನು ಸಿದ್ಧಪಡಿಸಿದ್ದು, ಅದನ್ನು ಅನುಬಂಧದಲ್ಲಿ ನಮೂದಿಸಿದೆ.

ಸದರಿ ವೆಚ್ಚವನ್ನು ಲೆಕ್ಕಶೀರ್ಷಿಕೆ 2204-00-104-0-02-015 ಕ್ರೀಡಾ ಚಟುವಟಿಕೆಗಳಿಗೆ ಪ್ರೋತ್ಸಾಹದಡಿ ಒದಗಿಸಿರುವ ಅನುದಾನದಡಿಯಲ್ಲಿ ಭರಿಸತಕ್ಕದ್ದು.

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 01. ಟಿಎಫ್‌ಪಿ 2008, ದಿನಾಂಕ: 16-05-2008ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

S. G. Gangadhar

(ಎಸ್.ಜಿ.ಗಂಗಾಧರ್)
ಪೀಠಾಧಿಕಾರಿ
ಯುವಜನ ಸೇವಾ ಇಲಾಖೆ
17/4/10

ಗೆ,

1) ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ನಿರ್ದೇಶಕರು, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು.
3) ಎಲ್ಲಾ ಜಿಲ್ಲಾಧಿಕಾರಿಗಳಿಗೆ (ನಿರ್ದೇಶಕರು, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು ಇವರ ಮುಖಾಂತರ).
4) ಉಪ ನಿರ್ದೇಶಕರು, ಟಿಎಸ್‌ಎಂಸಿ., ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
5) ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6) ಆಂತರಿಕ ಆರ್ಥಿಕ ಸಲಹೆಗಾರರು,ಯುವಜನ ಸೇವಾ ಇಲಾಖೆ, ಬ.ಮ.ಕಟ್ಟಡ,ಬೆಂಗಳೂರು.
7) ಮಾನ್ಯ ಜವಳಿ,ಯುವಜನಸೇವಾ ಮತ್ತು ಕ್ರೀಡಾ ಸಚಿವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
8) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7/8), ವಿಧಾನಸೌಧ, ಬೆಂಗಳೂರು.
9) ಸರ್ಕಾರದ ಕಾರ್ಯದರ್ಶಿಗಳು, ಯುವಜನ ಸೇವಾ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
10) ಸರ್ಕಾರದ ಅಪರ ಕಾರ್ಯದರ್ಶಿ, ಯುವಜನ ಸೇವಾ ಇಲಾಖೆ ಇವರ ಆಪ್ತ ಸಹಾಯಕರು.
11) ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು.